ಓ.ಎಸ್. ನಂಬರಃ 80/2024

**ಪಿ. ಡಬ್ಲ್ಯೂಃ 1**

**(ಸಾಕ್ಷಿಗೆ ಪ್ರಮಾಣವಚನ ಭೋದಿಸಲಾಯಿತು, ತಾಃ 18-07-2025)**

**ಮುಖ್ಯ ವಿಚಾರಣೆ : ವಾದಿ ಪರ ಶ್ರೀ ವಿ.ಎಫ್.ಜಿ. ವಕೀಲರಿಂದ,**

ನಾನು ಈ ದಾವೆಯಲ್ಲಿ ವಾದಿ ಇದ್ದು, ವಾದಿಯ ಪರವಾಗಿ ಸಾಕ್ಷಿ ಪ್ರಮಾಣ ಪತ್ರವನ್ನು ದಾಖಲಿಸಿದ್ದು ಅದನ್ನು ನಾನು ಓದಿ ನೋಡಿ ಸಹಿ ಮಾಡಿರುತ್ತೇನೆ. ಅದರಲ್ಲಿ ಬರೆದ ಎಲ್ಲಾ ವಿಷಯಗಳು ನಿಜ ಇರುತ್ತವೆ.

ದಾವಾ ಆಸ್ತಿಗೆ ಸಂಬಂಧಿಸಿದಂತೆ 2 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ-1 ಮತ್ತು 2 ಎಂದು, ಅಸಲು ದಾವೆ ಸಂಖ್ಯೆ: 58/95 ಕ್ಕೆ ಸಂಬಂಧಿಸಿದಂತೆ ಎ ರಜಿಸ್ಟರ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-3 ಎಂದು, 2 ತೆರಿಗೆ ಪಾವತಿ ರಶೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ-4 ಮತ್ತು 5 ಎಂದು, ದಾವಾ ಅಂಗಡಿಗೆ ಸಂಬಂಧಿಸಿದಂತೆ ಪೋಟೋ ಹಾಜರುಪಡಿಸಿದ್ದು, ಪ್ರತಿವಾದಿ ಪರ ವಕೀಲರು ಪೋಟೋಗೆ ಸಂಬಂಧಿಸಿದಂತೆ ಡಿ.ವಿ.ಡಿ. ಇಲ್ಲ ಎಂದು ತಕರಾರು ಮಾಡಿದ್ದು, ಅವರ ತಕರಾರಿಗೆ ಒಳಪಟ್ಟು, ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

**ವಾದಿ ಪರ ವಕೀಲರು ಮುಂದುವರಿದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೇಳಿದ್ದರಿಂದ ಮುಂದೂಡಲಾಯಿತು.**

**(ನನ್ನ ಹೇಳಿಕೆ ಪ್ರಕಾರ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ. ಹೇ.ಕೇ. ಸರಿ ಇದೆ**

**ಸಹಿ ಇದೆ.**

**ಹೆಚ್ಚುವರಿ ಸಿವಿಲ್ ಜಡ್ಜ, ಭಟ್ಕಳ**